ನಾನು ಐದು ವೇಳೆಯ ಕಡ್ಡಾಯ ನಮಾಝ್ಗಳನ್ನು ನಿರ್ವಹಿಸಿದರೆ, ರಮದಾನ್ ತಿಂಗಳಲ್ಲಿ ಉಪವಾಸ ಆಚರಿಸಿದರೆ, ಧರ್ಮಸಮ್ಮತವಾಗಿರುವುದನ್ನು ಧರ್ಮಸಮ್ಮತವೆಂದು ಮತ್ತು ಧರ್ಮನಿಷಿದ್ಧವಾಗಿರುವುದನ್ನು ಧರ್ಮನಿಷಿದ್ಧವೆಂದು ಪರಿಗಣಿಸಿದರೆ

ಜಾಬಿರ್ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ: ಒಬ್ಬ ವ್ಯಕ್ತಿ ಅಲ್ಲಾಹನ ಸಂದೇಶವಾಹಕರೊಂದಿಗೆ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಕೇಳಿದರು: "ನಾನು ಐದು ವೇಳೆಯ ಕಡ್ಡಾಯ ನಮಾಝ್ಗಳನ್ನು ನಿರ್ವಹಿಸಿದರೆ, ರಮದಾನ್ ತಿಂಗಳಲ್ಲಿ ಉಪವಾಸ ಆಚರಿಸಿದರೆ, ಧರ್ಮಸಮ್ಮತವಾಗಿರುವುದನ್ನು ಧರ್ಮಸಮ್ಮತವೆಂದು ಮತ್ತು ಧರ್ಮನಿಷಿದ್ಧವಾಗಿರುವುದನ್ನು ಧರ್ಮನಿಷಿದ್ಧವೆಂದು ಪರಿಗಣಿಸಿದರೆ, ಮತ್ತು ಇವುಗಳಿಗಿಂತ ಹೆಚ್ಚು ಏನೂ ನಿರ್ವಹಿಸದಿದ್ದರೆ,
ನಾನು ಸ್ವರ್ಗಕ್ಕೆ ಹೋಗುವೆನೇ?" ಅವರು ಉತ್ತರಿಸಿದರು: "ಹೌದು." ಆ ವ್ಯಕ್ತಿ ಹೇಳಿದರು: "ಅಲ್ಲಾಹನಾಣೆ! ನಾನು ಅವುಗಳಿಗಿಂತ ಏನೂ ಹೆಚ್ಚಿಸುವುದಿಲ್ಲ." [صحيح] [رواه مسلم]

ಈ ಹದೀಸ್ನಲ್ಲಿ ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ವಿವರಿಸುವುದೇನೆಂದರೆ, ಒಬ್ಬ ವ್ಯಕ್ತಿ ಯಾವುದೇ ಐಚ್ಛಿಕ ನಮಾಝ್ಗಳನ್ನು ನಿರ್ವಹಿಸದೆ ಕೇವಲ ಐದು ವೇಳೆಯ ಕಡ್ಡಾಯ ನಮಾಝ್ಗಳನ್ನು ಮಾತ್ರ ನಿರ್ವಹಿಸಿದರೆ, ಮತ್ತು ಯಾವುದೇ ಐಚ್ಚಿಕ ಉಪವಾಸಗಳನ್ನು ಆಚರಿಸದೆ ಕೇವಲ ರಮದಾನ್ ತಿಂಗಳಲ್ಲಿ ಮಾತ್ರ ಉಪವಾಸ ಆಚರಿಸಿದರೆ, ಮತ್ತು ಧರ್ಮಸಮ್ಮತವಾಗಿರುವುದನ್ನು ಧರ್ಮಸಮ್ಮತವೆಂದು ಪರಿಗಣಿಸಿ ಅವುಗಳನ್ನು ನಿರ್ವಹಿಸಿದರೆ, ಮತ್ತು ಧರ್ಮನಿಷಿದ್ಧವಾಗಿರುವುದನ್ನು ಧರ್ಮನಿಷಿದ್ಧವೆಂದು ಪರಿಗಣಿಸಿ, ಅವುಗಳಿಂದ ದೂರ ಸರಿದರೆ, ಅವನು ಖಂಡಿತವಾಗಿಯೂ ಸ್ವರ್ಗಕ್ಕೆ ಹೋಗುತ್ತಾನೆ.

https://sunnah.global/hadeeth/kn/show/65003